ಶ್ರೀಮತಿ ಬಾಗೀರಥಿ ಮರುಳಸಿದ್ಧನಗೌಡ:– ಮಾನ್ಯ ಸಭಾಧ್ಯಕ್ಷರೆ, ಮಾನ್ಯ ಸದಸ್ಯರು ನನ್ನ ಗಮನಕ್ಕೆ ಏನು ವಿಚಾರ ತಂದಿದ್ದಾರೆ, ಅದನ್ನು ಪರಿಶೀಲನೆ ಮಾಡುತ್ತೇನೆ ಎನ್ನತಕ್ಕ ಮಾತನ್ನು ತಮ್ಮ ಮೂಲಕ ಮಾನ್ಯ ಸದಸ್ಯರಿಗೆ ತಿಳಿಸುತ್ತೇನೆ.

ಶ್ರೀ ವಾಟಾಳ್ ನಾಗರಾಜ್:– ಪರಿಶೀಲನೆ ಅಲ್ಲ. ಇಲ್ಲಿ 18 ವರ್ಷದೊಳಗಿನ ಬುದ್ಧಿ ಮಾಂದ್ಯ ಮಕ್ಕಳ ಬಾಲಮಂದಿರವನ್ನು ಬೆಂಗಳೂರಿನಲ್ಲೇ ಸ್ಥಾಪಿಸಲಾಗಿದೆ. ಇದು ಬೆಂಗಳೂರಲ್ಲಿ ಮಾತ್ರ ಈ ಮಕ್ಕಳಿಲ್ಲ. ಇಡೀ ರಾಜ್ಯದ ಎಲ್ಲಾ ಕಡೆ ಬರುತ್ತಾರೆ. ಕನಿಷ್ಟ ಜಿಲ್ಲಾ ಕೇಂದ್ರಗಳಲ್ಲಾದರೂ ತಾವು ಈ ರೀತಿ ಬಾಲ ಮಂದಿರಗಳನ್ನು ಸ್ಥಾಪನೆ ಮಾಡುತ್ತೀರಾ?

ಶ್ರೀಮತಿ ಭಾಗೀರಥಿ ಮರುಳಸಿದ್ಧನಗೌಡ:– ಈ ವಿಷಯವನ್ನು ಮನಗಂಡು ತಾವು ಏನು ಹೇಳಿದ್ದೀರಿ, ನಾನು ಅಧಿಕಾರಿಗಳೊಂದಿಗೆ ಚರ್ಚಿಸಿ ಇದನ್ನು ಯಾವ ರೀತಿ ಪ್ರಾರಂಭ ಮಾಡುವುದಕ್ಕೆ ಸಾಧ್ಯತೆ ಆಗುತ್ತದೆ ಎನ್ನತಕ್ಕದ್ದನ್ನು ಮನಗಂಡು ಪ್ರಾರಂಭ ಮಾಡಬೇಕಾಗುತ್ತದೆ ಎನ್ನತಕ್ಕ ಮಾತನ್ನು ತಮ್ಮ ಮುಖಾಂತರ ನಾನು ಮಾನ್ಯ ಸದಸ್ಯರಿಗೆ ತಿಳಿಸಲು ಇಷ್ಟಪಡುತ್ತೇನೆ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 117(1579)

(ಮಾನ್ಯ ಸದಸ್ಯರು ಗೈರುಹಾಜರಿದ್ದರು)

ಅ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು:

ಶ್ರೀ ಆರ್.ವಿ.ದೇಶಪಾಂಡೆ(ಮಾನ್ಯ ಸಹಕಾರ ಸಚಿವರು):– ಮಾನ್ಯ ಅಧ್ಯಕ್ಷರೆ, ದಿನಾಂಕ 04.02.2005ರ 9ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 116 ಪ್ರಶ್ನೆಗಳ ಪೈಕಿ 106 ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ. xx (ಅನುಬಂಧ–III)

ಛೇರ್ಮನ್:– ಮಂಡಿಸಲಾಯಿತು. ಇಷ್ಟು ಹೊತ್ತಿನ ತನಕ ಸದನವನ್ನು ಸುಗಮವಾಗಿ ನಡೆಸಲಿಕ್ಕೆ ಸಹಕರಿಸಿರತಕ್ಕಂಥ ಸಭಾ ನಾಯಕರು, ಮಂತ್ರಿಗಳು ಮತ್ತು ಹಾಜರಿದ್ದಂತಹ ಎಲ್ಲಾ ಶಾಸಕರುಗಳು ಅಧಿಕಾರಿಗಳು ಮತ್ತು ಪತ್ರಕರ್ತರಿಗೆ ಅಭಿನಂದಿಸಿ ಈಗ ಸದನವನ್ನು ನಾಳೆ ಬೆಳಿಗ್ಗೆ 9.00 ಗಂಟೆವರೆಗೆ ಮುಂದೂಡಲಾಗಿದೆ.

(ಸದನವು ರಾತ್ರಿ 11.15ಕ್ಕೆ ಮುಂದೂಡಲ್ಪಟ್ಟು ಪುನಃ ದಿನಾಂಕ 05ನೇ ಫೆಬ್ರವರಿ 2005ರಂದು ಬೆಳಿಗ್ಗೆ 9.00 ಗಂಟೆಗೆ ಸಮಾವೇಶಗೊಳ್ಳಲು ನಿಶ್ಚಯಿಸಿತು.)

ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2005

[2005ರ ವಿಧಾನ ಸಭೆಯ ವಿಧೇಯಕ ಸಂಖ್ಯೆ 4]

ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ 2003ನ್ನು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ನ್ನು (2004ರ ಕರ್ನಾಟಕ ಅಧಿನಿಯಮ 32) ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:–